# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 295

2) ಸದಸ್ಯರ ಹೆಸರು : ಶ್ರೀ ಎಸ್.ವ್ಹಿ.ಸುಂಕನೂರ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು)

3) ಉತ್ತರಿಸಬೇಕಾದ ದಿನಾಂಕ : 06-12-2023

4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಮೀನುಗಾರರ ಹಿತದೃಷ್ಟಿಯಿಂದ ಮುಂಬರುವ ವರ್ಷಗಳಲ್ಲಿ ಪ್ರತ್ಯೇಕ ವಿಶ್ವವಿದ್ಯಾಲಯ ಸ್ಥಾಪನೆ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಮೀನುಗಾರರ ಹಿತದೃಷ್ಟಿಯಿಂದ ಮತ್ತು ಮೀನುಗಾರಿಕೆ ಕ್ಷೇತ್ರದ ಅಭಿವೃದ್ಧಿ ದೃಷ್ಟಿಯಿಂದ ಹಾಗೂ ಕರ್ನಾಟಕದಲ್ಲಿ ಮೀನುಗಾರಿಕೆಗೆ ವಿಫುಲ ಅವಕಾಶಗಳಿರುವುದರಿಂದ ಮತ್ತು ಭಾರತ ದೇಶದಲ್ಲಿ ಪ್ರಪ್ರಥಮವಾಗಿ ಪ್ರಾರಂಭವಾದ ಮೀನುಗಾರಿಕೆ ಮಹಾವಿದ್ಯಾಲಯ ಮಂಗಳೂರಿನಲ್ಲಿರುವುದರಿಂದ ಪ್ರತ್ಯೇಕ ಮೀನುಗಾರಿಕೆ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಚಿಂತನೆ ನಡೆಸಿದೆ.<br><br>ಈ ಹಿಂದೆ ಒಂದು ಪ್ರತ್ಯೇಕ ಮೀನುಗಾರಿಕೆ ವಿಶ್ವವಿದ್ಯಾಲಯ ಸ್ಥಾಪಿಸುವ ಬಗ್ಗೆ ಸಮಿತಿಯನ್ನು ರಚಿಸಲಾಗಿತ್ತು. ಸಮಿತಿಯು ಸಭೆಯನ್ನು ನಡೆಸಿ ಪ್ರತ್ಯೇಕ ಮೀನುಗಾರಿಕೆ ವಿಶ್ವವಿದ್ಯಾಲಯ ಸ್ಥಾಪಿಸುವ ಬಗ್ಗೆ ಪ್ರಾಥಮಿಕ ಅಭಿಪ್ರಾಯ ನೀಡಿರುತ್ತದೆ. |
| ಆ) | ಮೀನುಗಾರಿಕೆ ವಿಶ್ವವಿದ್ಯಾಲಯ ಸ್ಥಾಪನೆಯ ಅವಶ್ಯಕತೆ ಕುರಿತು ಅಧ್ಯಯನ ನಡೆಸಿ ತಜ್ಞರಿಂದ ವರದಿ ಪಡೆಯಲಾಗಿದೆಯೇ; | ಪ್ರಾಥಮಿಕ ಅಭಿಪ್ರಾಯದಂತೆ, ಶಿಕ್ಷಣ ತಜ್ಞರು, ಭಾರತೀಯ ಕೃಷಿ ಅನುಸಂಧಾನ ಸಂಸ್ಥೆ (ICAR)ಯ ವಿಜ್ಞಾನಿಗಳು, ಮೀನುಗಾರಿಕೆ ಕ್ಷೇತ್ರದ ತಜ್ಞರನ್ನು ಒಳಗೊಂಡಂತೆ ಒಂದು ಉನ್ನತ ಮಟ್ಟದ ತಜ್ಞರ ಸಮಿತಿಯನ್ನು ರಚಿಸಿ ಸಮಗ್ರ ವರದಿಯನ್ನು ಪಡೆಯಲಾಗುವುದು. |
| ಇ) | ಮೀನುಗಾರಿಕೆ ಪ್ರತ್ಯೇಕ ವಿಶ್ವವಿದ್ಯಾಲಯ ಸ್ಥಾಪಿಸುವ ಚಿಂತನೆ ಬಗ್ಗೆ ಮಾಡಿ ಕೊಂಡಿರುವ ಪೂರ್ವಸಿದ್ಧತೆ ಏನು? (ಸಂಪೂರ್ಣ ಮಾಹಿತಿ ನೀಡುವುದು) | ಪ್ರತ್ಯೇಕ ಮೀನುಗಾರಿಕೆ ವಿಶ್ವವಿದ್ಯಾಲಯ ಸ್ಥಾಪನೆ ಕುರಿತು ಉನ್ನತ ಮಟ್ಟದ ತಜ್ಞರ ಸಮಿತಿಯು ಸಾಧ್ಯತಾ ವರದಿ ನೀಡಿದ ನಂತರ ಅವಶ್ಯಕತೆ ಇದ್ದಲ್ಲಿ ಸಮಗ್ರ ಯೋಜನಾ ವರದಿ ಪಡೆಯಲು ಕ್ರಮವಹಿಸಲಾಗುವುದು. |

ಸಂಖ್ಯೆ: ಪಸಂಮೀ ಇ-200 ಮೀಇಯೋ 2023

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು